# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 710 (715) |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 10.03.2026 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ದೊಡ್ಡ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಲ್ಲಿ ನಿರುದ್ಯೋಗ ಹೆಚ್ಚಾಗಲು ಪ್ರಮುಖ ಕಾರಣಗಳೇನು; | ದೊಡ್ಡ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಲ್ಲಿ ನಿರುದ್ಯೋಗ ಸಮಸ್ಯೆ ಹೆಚ್ಚಾಗಿರುವ ಬಗ್ಗೆ ದೂರುಗಳು ಸ್ವೀಕೃತವಾಗಿರುವುದಿಲ್ಲ. ಆದಾಗ್ಯೂ, ಆಧುನಿಕತೆಗೆ ಅನುಗುಣವಾಗಿ ಕೌಶಲ್ಯ ತರಬೇತಿ ಒದಗಿಸುತ್ತಿದ್ದು, ನಿರುದ್ಯೋಗ ಸಮಸ್ಯೆ ನಿವಾರಿಸಲಾಗುತ್ತಿದೆ. |
| ಆ | ದೊಡ್ಡ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಿಂದ ನಿರುದ್ಯೋಗವನ್ನು ಪರಿಹರಿಸಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ; | ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗಾಗಿ ಮತ್ತು ಹೊಸ ಕೈಗಾರಿಕೆಗಳನ್ನು ಆಕರ್ಷಿಸಲು ಸರ್ಕಾರವು ಕೆಳಕಂಡ ಆದ್ಯತಾ/ಪ್ರೋತ್ಸಾಹಕ ಕ್ರಮಗಳನ್ನು ಕೈಗೊಳ್ಳಲಾಗಿದೆ:<br><br>➢ ಕೈಗಾರಿಕೆಗಳನ್ನು ಸ್ಥಾಪಿಸುವವರಿಗೆ ಸಹಾಯಧನ ಮತ್ತು ರಿಯಾಯಿತಿಗಳನ್ನು ನೀಡುವ ಬಗ್ಗೆ, ಕೈಗಾರಿಕೆ ನೀತಿ 2025-30ನ್ನು ಹೊರತರಲಾಗಿದೆ. ಕೈಗಾರಿಕಾ ಬೆಳವಣಿಗೆಯನ್ನು ಆಧಾರಿಸಿ ಕೈಗಾರಿಕೆಗಳಿಗೆ ಹೆಚ್ಚಿನ ಪ್ರೋತ್ಸಾಹವನ್ನು ನೀಡಲಾಗುತ್ತಿದೆ. ಸದರಿ ನೀತಿಯಲ್ಲಿ ಬೆಂಗಳೂರು ಹೊರತುಪಡಿಸಿ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಹೂಡಿಕೆಗೆ ಹೆಚ್ಚು ಅವಕಾಶ ಕಲ್ಪಿಸಲು ಹೆಚ್ಚಿನ ಉತ್ತೇಜನ ಮತ್ತು ರಿಯಾಯಿತಿಗಳನ್ನು ಘೋಷಿಸಲಾಗಿದೆ.<br><br>➢ ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಭೂಮಿ ಖರೀದಿ ಪ್ರಕ್ರಿಯೆ ಸರಳೀಕರಣಗೊಳಿಸಲಾಗಿದೆ. 2 ಎಕರೆವರೆಗಿನ ಕೃಷಿ ಭೂಮಿಯಲ್ಲಿ ಕೈಗಾರಿಕೆ ಸ್ಥಾಪನೆ ಮಾಡಲು ಭೂಪರಿವರ್ತನೆಯಿಂದ ವಿನಾಯಿತಿ ನೀಡಲಾಗಿದೆ.<br><br>➢ ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಕೆಲವು ಮುಖ್ಯ ಎನ್.ಒ.ಸಿ/ಒಪ್ಪಿಗೆಗಳನ್ನು ಸ್ವಯಂ ಘೋಷಣಾ ಪತ್ರದ ಆಧಾರದ ಮೇಲೆ ಪಡೆಯಲು 3 ವರ್ಷಗಳವರೆಗೆ ವಿಸ್ತರಿಸಿ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ 2002ಕ್ಕೆ ತಿದ್ದುಪಡಿ ತರಲಾಗಿದೆ.<br><br>➢ ವಲಯವಾರು ಕೈಗಾರಿಕಾ ನೀತಿ ಜಾರಿಗೆ ತರಲಾಗಿದೆ.<br><br>➢ ರಾಜ್ಯದಲ್ಲಿ ಸುಲಲಿತ ವ್ಯವಹಾರಕ್ಕೆ (EoDB) ಒತ್ತುನೀಡಲು ಹಾಗೂ ರಾಜ್ಯದಲ್ಲಿ ಇನ್ನೂ ಹೆಚ್ಚಿನ ಕೈಗಾರಿಕಾ ಸ್ನೇಹಿ ವಾತವರಣ ಸೃಷ್ಟಿಸಲು ಏಕಗವಾಕ್ಷಿ ಪೋರ್ಟಲ್ (Single Window Portal -SWP) ಅಭಿವೃದ್ಧಿ ಪಡಿಸಲಾಗಿದೆ ಹಾಗೂ ಇತರೆ ಸಂಬಂದಿಸಿದ ಇಲಾಖೆಗಳ ಸೇವೆಗಳನ್ನು ಸಂಯೋಜಿಸಲಾಗಿದೆ. |

| | | |
|---|---|---|
| ಇ | ರಾಜ್ಯದಲ್ಲಿ ಉದ್ಯೋಗ ಸೃಷ್ಟಿಗೆ MSME ಗಳು ಮತ್ತು ದೊಡ್ಡ ಕೈಗಾರಿಕೆಗಳು ಹೇಗೆ ವಿಭಿನ್ನವಾಗಿ ಕೊಡುಗೆ ನೀಡುತ್ತಿವೆ; (ಮಾಹಿತಿ ನೀಡುವುದು) | ರಾಜ್ಯದಲ್ಲಿ ಉದ್ಯೋಗ ಸೃಷ್ಟಿಗೆ MSME ಮತ್ತು ದೊಡ್ಡ ಕೈಗಾರಿಕೆಗಳನ್ನು ಹೂಡಿಕೆ ಅನುಗುಣವಾಗಿ ವರ್ಗೀಕರಿಸಲಾಗಿದ್ದು, ಅದರಂತೆ, ಉದ್ಯೋಗವನ್ನು ಸೃಜಿಸ ಬೇಕಾಗಿರುತ್ತದೆ.<br><br>ಅಲ್ಲದೇ, ಕೈಗಾರಿಕಾ ನೀತಿ 2025-30 ರನ್ವಯ ಹೆಚ್ಚುವರಿ ಉದ್ಯೋಗ ಒದಗಿಸುವ ದೊಡ್ಡ ಕೈಗಾರಿಕೆಗಳಿಗೆ ಉದ್ಯೋಗ ಬೂಸ್ಟರ್ ಸಬ್ಸಿಡಿ ಪಡೆಯಲು ಹೆಚ್ಚುವರಿ ಉತ್ತೇಜಕಗಳನ್ನು ಕಲ್ಪಿಸಲಾಗಿದೆ. |
| ಈ | ರಾಜ್ಯದಿಂದ ಕೈಗಾರಿಕೆಗಳ ಮುಚ್ಚುವಿಕೆ ಅಥವಾ ಸ್ಥಳಾಂತರವು ಸ್ಥಳೀಯ ಉದ್ಯೋಗದ ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ತೆಗೆದುಕೊಂಡ ಕ್ರಮಗಳೇನು; | ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗಾಗಿ ಮತ್ತು ಹೊಸ ಕೈಗಾರಿಕೆಗಳನ್ನು ಆಕರ್ಷಿಸಲು ಸರ್ಕಾರವು ಹಲವು ಆದ್ಯತಾ/ಪ್ರೋತ್ಸಾಹಕ ಕ್ರಮಗಳನ್ನು ಕೈಗೊಂಡಿದ್ದು, ವಿವರಗಳನ್ನು (ಅ) ರಲ್ಲಿ ವಿವರಿಸಲಾಗಿದೆ. |
| ಉ | ರಾಜ್ಯದಲ್ಲಿ ಹೆಚ್ಚಿನ ಸ್ಥಳೀಯ ಉದ್ಯೋಗಗಳನ್ನು ಸೃಷ್ಟಿಸಲು ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಮತ್ತು ನಿರುದ್ಯೋಗ ಸಮಸ್ಯೆ ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು) | |

ಸಿಐ 42 ಎಸ್‌ಪಿಐ 2026

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು